ಓ ಎಸ್ ನಂಃ 327/2018

**ಪಿ. ಡಬ್ಲ್ಯೂ ಃ 1**

**ದಿಃ 18.11.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಪಾಟೀ ಸವಾಲು ಃ1 ಮತ್ತು 2 ನೇ ಪ್ರತಿವಾದಿ ಪರ ಶ್ರೀ ಹೆಚ್ ಜೆ ಡಿ ವಕೀಲರಿಂದ ಃ**

ದಿನಾಂಕ ಃ 10.1.1980 ರಂದು ನನ್ನ ಅಣ್ಣ ಮತ್ತು ತಮ್ಮ ಸೇರಿ ಒಂದು ಪಂಚಾಯಿತಿ ವಿಭಾಗ ಪತ್ರ ಮಾಡಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಆ ದಿನದಂದು ಆದ ವಿಭಾಗ ಪತ್ರದಂತೆ ನನ್ನ ಅಣ್ಣ ಮತ್ತು ತಮ್ಮ ಸ್ವತ್ತುಗಳ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. ಎಂ ಆರ್ 10/1993-94 ರಂತೆ ಅವರು ಖಾತೆ ಬದಲಾವಣೆ ಮಾಡಿಕೊಂಡು ದಾವಾ ಸ್ವತ್ತುಗಳ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಮ್ಮ ನರಸಿಂಹಮೂರ್ತಿ ದಿನಾಂಕ ಃ 23.09.2003 ರಂದು ಮರಣ ಹೊಂದಿದ್ದಾರೆ ಎಂದರೆ ಸರಿ. ಅವರ ಹೆಂಡತಿ ನರಸಿಂಹಮೂರ್ತಿ ಮರಣ ಹೊಂದಿದ ನಂತರ ಖಾತೆ ಬದಲಾವಣೆ ಮಾಡಿಕೊಂಡು ಸ್ವಾಧೀನದಲ್ಲಿದ್ದರು ಎಂದರೆ ನನಗೆ ಗೊತ್ತಿಲ್ಲ ಎಂದ ಸಾಕ್ಷಿ ಹೇಳುತ್ತಾರೆ.

ನರಸಿಂಹಮೂರ್ತಿ ರವರ ಹೆಂಡತಿ ಸುಶೀಲಮ್ಮ ದಿನಾಂಕ ಃ 2.7.2010 ರಂದು ತೀರಿಕೊಂಡಿದ್ದಾರೆ ಎಂದರೆ ಸರಿ. 2 ನೇ ಪ್ರತಿವಾದಿಯು ಖಾತೆ ಬದಲಾವಣೆ ಮಾಡಿಕೊಂಡು ಸ್ವಾಧೀನದಲ್ಲಿದ್ದಾರೆ ಎಂದರೆ ಇರಬಹುದು ನನಗೆ ಗೊತ್ತಿಲ್ಲ ಎಂದು ಸಾಕ್ಷಿ ಹೇಳುತ್ತಾರೆ. ನನ್ನ ಅಣ್ಣ ಮತ್ತು ತಮ್ಮ ತಮ್ಮ ಹೆಸರಿನಲ್ಲಿ ಖಾತೆ ಬದಲಾವಣೆ ಮಾಡಿಕೊಂಡು ವ್ಯವಸಾಯ ಮಾಡುತ್ತಿದ್ದರು ಎಂದರೆ ಸಾಕ್ಷಿ ವ್ಯವಸಾಯ ಮಾಡುತ್ತಿದ್ದರು ಆದರೆ ಖಾತೆ ಬದಲಾವಣೆ ಮಾಡಿಕೊಂಡಿದ್ದು ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. ಅವರು ಮಾರಾಟ ಮಾಡಿದ್ದು ನನಗೆ ಗೊತ್ತಿಲ್ಲ ಎಂದು ಸಾಕ್ಷಿ ಹೇಳುತ್ತಾರೆ. ಈ ಎಲ್ಲ ವಿಷಯಗಳು ನನಗೆ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪ್ರತಿವಾದಿ 1 ಮತ್ತು ನರಸಿಂಹಮೂರ್ತಿ ಇವರು ಚಂದ್ರಕಾಂತಮ್ಮ ಎನ್ನುವವರಿಗೆ ಸ್ವತ್ತು ಮಾರಾಟ ಮಾಡಿದ್ದಾರೆ ಎಂದು 4 ವರ್ಷಗಳ ಹಿಂದೆ ನಮಗೆ ಗೊತ್ತಾಗಿದೆ. ಗೊತ್ತಾದ ನಂತರ ನಾವು ದಾವೆ ಮಾಡಿದ್ದೇವೆ ಎಂದು ಸಾಕ್ಷಿ ಹೇಳುತ್ತಾರೆ. ಸುಮಾರು 40 ವರ್ಷಗಳ ಹಿಂದೆ 1 ನೇ ಪ್ರತಿವಾದಿ ಸ್ವತ್ತು ಮಾರಾಟ ಮಾಡಿರುವ ವಿಷಯ ನನಗೆ ಗೊತ್ತಿತ್ತು ಎಂದರೆ ಸರಿಯಲ್ಲ. ಈಗ 4 ನೇ

ಪ್ರತಿವಾದಿಯೇ ಸ್ವಾಧೀನದಲ್ಲಿರುತ್ತಾರೆ ಎಂದರೆ ಗೊತ್ತಿಲ್ಲ. ದಾವಾ ಸ್ವತ್ತುಗಳಲ್ಲಿ ನನಗೆ ಯಾವುದೆ ಭಾಗಾಂಶದ ಹಕ್ಕು ಇಲ್ಲ ಎಂದರೆ ಸರಿಯಲ್ಲ. ನಾನು ಪ್ರತಿವಾದಿಗಳ ವಿರುದ್ದ ಒಂದು ಸುಳ್ಳು ದಾವೆ ಮಾಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**3 ನೇ ಪ್ರತಿವಾದಿ ಮತ್ತು ಅವರ ಪರ ವಕೀಲರನ್ನು ಕರೆಸಲಾಯಿತು. ಗೈರುಹಾಜರಾಗಿರುವುದರಿಂದ ಅವರ ಪರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**4 ನೇ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು,**

**ಮಾಗಡಿ.**